ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂ: DTE-ADMI0SCH2/5/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಬೆಂಗಳೂರು-560 001.
ದಿನಾಂಕ: 18-01-2021.

-:: ಸುತ್ತೋಲೆ ::-

**ವಿಷಯ :** 2020-21 ಸಾಲಿಗೆ ದ್ವಿತೀಯ ಮತ್ತು ತೃತೀಯ ವರ್ಷಕ್ಕೆ ಪ್ರವೇಶ ಪಡೆದಿರುವ ಎಲ್ಲಾ ವಿದ್ಯಾರ್ಥಿಗಳು ಸಂಸ್ಥೆಗೆ ಪಾವತಿಸಿರುವ ಪ್ರವೇಶ/ಪರೀಕ್ಷಾ ಹಾಗೂ ವಿವಿಧ ಶುಲ್ಕಗಳ ಮಾಹಿತಿಯನ್ನು ತಂತ್ರಾಂಶದಲ್ಲಿ Upload ಮಾಡುವ ಬಗ್ಗೆ.

**ಉಲ್ಲೇಖ :** ದಿನಾಂಕ: 18-01-2021ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಡಿ.ಪಿ.ಆರ್.ಎ (ಇ-ಆಡಳಿತ) ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನೀಡಿದ ನಿರ್ದೇಶನಗಳು.

-00000000-

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸಭೆಯಲ್ಲಿ ನೀಡಿದ ನಿರ್ದೇಶನದಂತೆ 2020-21ನೇ ಸಾಲಿಗೆ ದ್ವಿತೀಯ ಮತ್ತು ತೃತೀಯ ವರ್ಷದ ಡಿಪ್ಲೇಮಾ ತರಗತಿಗಳಿಗೆ ಪ್ರವೇಶ ಪಡೆದಿರುವ ಎಲ್ಲಾ ವಿದ್ಯಾರ್ಥಿಗಳ ಪ್ರವೇಶ/ಪರೀಕ್ಷಾ ಹಾಗೂ ವಿವಿಧ ಶುಲ್ಕಗಳ ಪಾವತಿಸಿರುವ ಮಾಹಿತಿಯನ್ನು ಸಂಸ್ಥೆಯ ಪ್ರವೇಶ ಪ್ರಕ್ರಿಯೆಗೆ ನೀಡಿರುವ **https://dtetech.karnataka.gov.in/dteone/emp/Login.aspx** ರ ತಂತ್ರಾಂಶದಲ್ಲಿ ನೀಡಲಾಗಿದ್ದು, ತಂತ್ರಾಂಶದಲ್ಲಿ ದಿನಾಂಕ : 21-01-2021ರ ಒಳಗೆ Upload ಮಾಡುವಂತೆ ಸೂಚಿಸಲಾಗಿದೆ. ತಂತ್ರಾಂಶದಲ್ಲಿ ಮಾಹಿತಿ Upload ಮಾಡುವ ವಿದ್ಯಾರ್ಥಿಗಳಿಗೆ ಮಾತ್ರ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಪೋರ್ಟಲ್‌ನಲ್ಲಿ ವಿದ್ಯಾರ್ಥಿವೇತನ/ಶುಲ್ಕ ಮರುಪಾವತಿಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಅದ್ದರಿಂದ ಸಂಸ್ಥೆಯ ಪ್ರಾಂಶುಪಾಲರೇ ತುರ್ತಾಗಿ ಎಲ್ಲಾ ವಿದ್ಯಾರ್ಥಿಗಳ ಶುಲ್ಕಗಳ ಮಾಹಿತಿಯನ್ನು ಪ್ರಥಮ ಆದ್ಯತೆ ಮೇರೆಗೆ Upload ಮಾಡುವಂತೆ ಈ ಮೂಲಕ ಆದೇಶಿಸಲಾಗಿದೆ.

ಮುಂದುವರೆದು, ವಿದ್ಯಾರ್ಥಿಗಳು ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸೈಬರ್ ಸೆಂಟರ್‌ಗಳಿಗೆ ಕಳುಹಿಸದೇ ಸಂಸ್ಥೆಗಳಲ್ಲಿಯೇ ಸೂಕ್ತ ವ್ಯವಸ್ಥೆ ಮಾಡಿ, ನಿಗಧಿತ ಕಾಲಮಿತಿಯೊಳಗೆ ಅರ್ಜಿ ಸಲ್ಲಿಸಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಗಿದೆ, ವಿದ್ಯಾರ್ಥಿವೇತನ/ಶುಲ್ಕ ಮರುಪಾವತಿಗೆ ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ವಂಚಿತರಾದಲ್ಲಿ ಇದಕ್ಕೆ ಸಂಬಂಧಪಟ್ಟ ಸಂಸ್ಥೆಯ ಮುಖ್ಯಸ್ಥರೇ ನೇರ ಹೊಣೆಗಾರರನ್ನಾಗಿ ಮಾಡಲಾಗುತ್ತದೇ.

**ಆಯುಕ್ತರು**

*ಇವರಿಗೆ :-*

1. ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಖಾಸಗಿ ಪಾಲಿಟೆಕ್ನಿಕ್ ಪ್ರಾಂಶುಪಾಲರ ಮುಂದಿನ ಕ್ರಮಕ್ಕಾಗಿ.
2. **ಸಂಯೋಜನಾಧಿಕಾರಿಯವರು,** ಇ-ಆಡಳಿತ, ಕಾ.ತಾ.ಶಿ.ಇ. ಬೆಂಗಳೂರು. (ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು).